ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸಂಸತ್ತು

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE : 13/12/19

# ಪೌರತ್ವ ಮಸೂದೆ ಸುಪ್ರೀಂಗೆ

13/12/19

## ವಿಧೇಯಕಕ್ಕೆ ತಡೆ ಕೋರಿ ಸುಪ್ರೀಂಗೆ ಮುಸ್ಲಿಂ ಲೀಗ್ ಅರ್ಜಿ

ನವದೆಹಲಿ: ಸಂಸತ್ತಿನ ಉಭಯ ಸದನಗಳಲ್ಲೂ ಅಂಗೀಕಾರವಾಗಿ ರಾಷ್ಟ್ರಪತಿಗಳ ಸಹಿಗೆ ಕಾದಿರುವ ಪೌರತ್ವ (ತಿದ್ದುಪಡಿ) ವಿಧೇಯಕ ಇದೀಗ ಕಾನೂನು ಸಮರಕ್ಕೆ ನಾಂದಿ ಹಾಡಿದೆ. ಈ ಮಸೂದೆ ವಿರುದ್ಧ ಸುಪ್ರೀಂಕೋರ್ಟ್‌ಗೆ ಮೊದಲ ಅರ್ಜಿ ಸಲ್ಲಿಕೆಯಾಗಿದೆ. ಸಂವಿಧಾನದ ಸಮಾನತೆಯ ಹಕ್ಕನ್ನು ಉಲ್ಲಂಘಿಸುವ ಹಾಗೂ ಧರ್ಮದ ಆಧಾರದಲ್ಲಿ ಅಕ್ರಮ ವಲಸಿಗರನ್ನು ಪ್ರತ್ಯೇಕಿಸಿ ನೋಡುವ ವಿಧೇಯಕ ಇದಾಗಿದ್ದು, ತಡೆ ನೀಡಬೇಕು ಎಂದು ಕೋರಿ ಇಂಡಿಯನ್ ಯೂನಿಯನ್ ಮುಸ್ಲಿಂ ಲೀಗ್ (ಐಯುಎಂಎಲ್) ಸರ್ವೋಚ್ಚ ನ್ಯಾಯಾಲಯದ ಕದ ಬಡಿದಿದೆ.

ಕಾಂಗ್ರೆಸ್ ಕೂಡ ಮಸೂದೆಯನ್ನು ನ್ಯಾಯಾಲಯದಲ್ಲಿ ಪ್ರಶ್ನಿಸಲು ಉದ್ದೇಶಿಸಿದ್ದು, ಶೀಘ್ರದಲ್ಲೇ ಅದು ಕೂಡ ಕೋರ್ಟ್ ಮೊರೆ ಹೋಗುವ ನಿರೀಕ್ಷೆ ಇದೆ.

**ಧಾರ್ಮಿಕ ತಾರತಮ್ಯ- ಐಯುಎಂಎಲ್:** ಪಾಕಿಸ್ತಾನ, ಬಾಂಗ್ಲಾದೇಶ, ಅಫ್ಘಾನಿಸ್ತಾನದ ಮುಸ್ಲಿಮೇತರ ಧಾರ್ಮಿಕ ನಿರಾಶ್ರಿತರಿಗೆ ಭಾರತೀಯ ನಾಗರಿಕತ್ವ ನೀಡುವ ಪೌರತ್ವ (ತಿದ್ದುಪಡಿ) ವಿಧೇಯಕಕ್ಕೆ ತಡೆ ನೀಡಬೇಕು ಎಂದು ಮುಸ್ಲಿಂ ಲೀಗ್ ತನ್ನ ಅರ್ಜಿಯಲ್ಲಿ ಮನವಿ ಮಾಡಿಕೊಂಡಿದೆ. 'ವಲಸಿಗರಿಗೆ ಪೌರತ್ವ ನೀಡುವುದರ ಕುರಿತು ನಮ್ಮ ತಕರಾರು ಇಲ್ಲ. ಆದರೆ ಧರ್ಮದ ಆಧಾರದ ಮೇಲೆ ತಾರತಮ್ಯ ಮಾಡುತ್ತಿರುವುದು ನಮ್ಮ ದೂರು. ಅಕ್ರಮ ವಲಸಿಗ ಎಂಬುದು ಒಂದು ವರ್ಗ. ಆ ವರ್ಗಕ್ಕೆ ಕಾನೂನು ಅನ್ವಯ ವಾಗುವುದಿದ್ದರೆ ಅದು ಧರ್ಮ, ಜಾತಿ ಅಥವಾ ರಾಷ್ಟ್ರೀಯತೆ ಮೀರಿದ್ದಾಗಿರಬೇಕು. ಆದರೆ ಮಸೂದೆ ಸಂವಿಧಾನದ ಆಶಯಕ್ಕೆ ವಿರುದ್ಧವಾಗಿದೆ ಎಂದು ದೂರಲಾಗಿದೆ.

### ಪೌರತ್ವ ಮಸೂದೆಗೆ ರಾಷ್ಟ್ರಪತಿ ಅಂಕಿತ

ನವದೆಹಲಿ: ಮಹತ್ವದ ರಾಷ್ಟ್ರೀಯ ಪೌರತ್ವ (ತಿದ್ದುಪಡಿ) ಮಸೂದೆಗೆ ರಾಜ್ಯಸಭೆ ಅನುಮೋದನೆ ದೊರೆತ ಬೆನ್ನಲ್ಲೇ, ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರು ಮಸೂದೆಗೆ ಗುರುವಾರ ಸಹಿ ಹಾಕಿದ್ದಾರೆ. ಈ ಮೂಲಕ ಮಸೂದೆ ಕಾಯ್ದೆಯ ಸ್ವರೂಪ ಪಡೆದುಕೊಂಡಿದ್ದು, ರಾಷ್ಟ್ರಪತಿಭವನದಿಂದ ಅಧಿಸೂಚನೆ ಹೊರಬಿದ್ದಿದೆ.



ಜಾರ್ಖಂಡ್ ಚುನಾವಣಾ ಪ್ರಚಾರದಲ್ಲಿ ಪ್ರಧಾನಿ ಮೋದಿ ಮಾತಿನ ವೈಖರಿ.

# ಪೌರತ್ವ ಮಸೂದೆ ಬಗ್ಗೆ ಚಿಂತೆ ಬೇಡ

## ಈಶಾನ್ಯ ಬೆಂಕಿ ನಂದಿಸಲು ಪ್ರಧಾನಿ ಮೋದಿ ಕಸರತ್ತು

ನವದೆಹಲಿ/ಧನಬಾದ್: ಪಾಕಿಸ್ತಾನ, ಬಾಂಗ್ಲಾದೇಶ, ಅಫ್ಘಾನಿಸ್ತಾನದ ಮುಸ್ಲಿಮೇತರರಿಗೆ ಪೌರತ್ವ ನೀಡುವ, ಸಂಸತ್ತಿನಲ್ಲಿ ಈಗಾಗಲೇ ಅಂಗೀಕಾರವಾಗಿರುವ ಪೌರತ್ವ (ತಿದ್ದುಪಡಿ) ಮಸೂದೆ ವಿರುದ್ಧ ಅಸ್ಸಾಂ ಸೇರಿದಂತೆ ಈಶಾನ್ಯ ರಾಜ್ಯಗಳಲ್ಲಿ ಭುಗಿಲೆದ್ದಿರುವ ಹಿಂಸೆಯನ್ನು ತಣಿಸಲು ಪ್ರಧಾನಿ ನರೇಂದ್ರ ಮೋದಿ ಅವರು ಪ್ರಯತ್ನ ಆರಂಭಿಸಿದ್ದಾರೆ. ಈ ಹಿಂಸಾಚಾರ ಕುರಿತು ಇದೇ ಮೊದಲ ಬಾರಿಗೆ ಮೌನ ಮುರಿದಿರುವ ಅವರು, ಪೌರತ್ವ ವಿಧೇಯಕ ಕುರಿತು ಯಾರೊಬ್ಬರೂ ಚಿಂತೆ ಪಡಬೇಕಿಲ್ಲ. ಅಸ್ಸಾಮಿಗಳ ಹಕ್ಕನ್ನು ಕಸಿಯಲು ಬಿಡುವುದಿಲ್ಲ ಎಂದು ಆಶ್ವಾಸನೆ ನೀಡಿದ್ದಾರೆ.

ಮೊದಲಿಗೆ ಈ ವಿಷಯ ಕುರಿತು ಅಸ್ಸಾಮಿ ಹಾಗೂ ಇಂಗ್ಲಿಷ್ ಎರಡೂ ಭಾಷೆಯಲ್ಲಿ ಟ್ವೀಟ್ ಮಾಡಿದ ಪ್ರಧಾನಿ, 'ಪೌರತ್ವ (ತಿದ್ದುಪಡಿ) ಮಸೂದೆ ಅಂಗೀಕಾರವಾಗಿದೆ ಎಂದು ಚಿಂತೆಪಡಬೇಕಿಲ್ಲ ಎಂದು ಅಸ್ಸಾಂನ ಸೋದರ, ಸೋದರಿಯರಿಗೆ ಭರವಸೆ ನೀಡುತ್ತೇನೆ. ಅಸ್ಸಾಂ ಒಪ್ಪಂದದ 6ನೇ ಅನುಬಂಧದಂತೆ ಅಸ್ಸಾಮಿ ಜನರ ರಾಜಕೀಯ, ಭಾಷಾ, ಸಾಂಸ್ಕೃತಿಕ ಹಾಗೂ ಭೂ ಹಕ್ಕುಗಳನ್ನು ಸಾಂವಿಧಾನಿಕವಾಗಿ ರಕ್ಷಿಸಲು ಸರ್ಕಾರ ಸಂಪೂರ್ಣವಾಗಿ ಬದ್ಧವಾಗಿದೆ. ನಿಮ್ಮಗಳ ಹಕ್ಕುಗಳು, ವಿಶಿಷ್ಟ ಗುರುತು, ಸುಂದರ ಸಂಸ್ಕೃತಿಯನ್ನು ಯಾರೂ ಕಸಿಯಲು ಆಗದು. ಅವೆಲ್ಲಾ ಮುಂದೆಯೂ ಏಳ್ಗೆ ಹೊಂದುತ್ತವೆ' ಎಂದು ಹೇಳಿದ್ದಾರೆ.

### ಜಾರಿ ಇಲ್ಲ: ಕೇರಳ, ಬಂಗಾಳ, ಪಂಜಾಬ್

ತಿರುವನಂತಪುರಂ: ರಾಜ್ಯಸಭೆಯಲ್ಲಿ ಪೌರತ್ವ ತಿದ್ದುಪಡಿ ಮಸೂದೆ ಅಂಗೀಕಾರಗೊಂಡ ಬೆನ್ನಲ್ಲೇ, ಮಸೂದೆ ಜಾರಿ ವಿಚಾರದಲ್ಲಿ ಕೇರಳ ಹಾಗೂ ಪಶ್ಚಿಮ ಬಂಗಾಳ, ಪಂಜಾಬ್ ಸರ್ಕಾರಗಳು ಕೇಂದ್ರಕ್ಕೆ ಸಡ್ಡು ಹೊಡೆದಿವೆ. ಇದೊಂದು ಅಸಾಂವಿಧಾನಿಕ ಮಸೂದೆ. ಪೌರತ್ವ ತಿದ್ದುಪಡಿ ಮಸೂದೆಗೆ ಕೇರಳದಲ್ಲಿ ಜಾಗ ಇಲ್ಲ ಎಂದು ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಗುರುವಾರ ಸುದ್ದಿಗಾರರಿಗೆ ತಿಳಿಸಿದ್ದಾರೆ. ಅಲ್ಲದೇ ಪ್ರಜಾಪ್ರಭುತ್ವ ಅಪಾಯದಲ್ಲಿದೆ ಎಂದು ಟ್ವೀಟ್ ಮಾಡಿದ್ದಾರೆ. ಇದೇ ವೇಳೆ ರಾಜ್ಯದಲ್ಲಿ ಮಸೂದೆ ಜಾರಿ ತಡೆಯುವ ನಿಟ್ಟಿನಲ್ಲಿ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಡಿ.20ರಂದು ಪಕ್ಷದ ಸಂಸದರು ಹಾಗೂ ಶಾಸಕರ ಸಭೆ ಕರೆದಿದ್ದಾರೆ.